ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 02/03/2020

# ವಿಧಾನಸಭಾ ಉಪಾಧ್ಯಕ್ಷರ ವಿರುದ್ಧ ಅವಿಶ್ವಾಸ ನಿರ್ಣಯ?

ಉ.ವಾ 2/3/20

**ಬೆಂಗಳೂರು:** ಇಂದಿನಿಂದ ಆರಂಭವಾಗಲಿರುವ ಬಜೆಟ್ ಅಧಿವೇಶನದಲ್ಲಿ ವಿಧಾನಸಭೆ ಉಪಾಧ್ಯಕ್ಷರ ಬದಲಾವಣೆಗೆ ಬಿಜೆಪಿ ಪ್ರಯತ್ನ ನಡೆಸುವ ಸಾಧ್ಯತೆ ಇದೆ.

ಸದ್ಯ ಜೆಡಿಎಸ್‌ನ ಕೃಷ್ಣಾರೆಡ್ಡಿ ಅವರು ವಿಧಾನಸಭೆ ಉಪಾಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಸೂಚನೆ ನೀಡುವ ಮಾತುಗಳಿವೆ. ಒಂದೊಮ್ಮೆ ಕೃಷ್ಣಾರೆಡ್ಡಿ ಅವರು ಸ್ವಯಂಪ್ರೇರಿತರಾಗಿ ಸ್ಥಾನ ತೊರೆಯದಿದ್ದರೆ ಅವರ ವಿರುದ್ಧ ಅವಿಶ್ವಾಸ ನಿರ್ಣಯ ಪ್ರಸ್ತಾಪ ಮಂಡಿಸಲು ಸಿದ್ಧತೆ ನಡೆದಿದೆ ಎಂದು ಮೂಲಗಳು ಹೇಳಿವೆ.

ಹಾಗೆಯೇ ಬಜೆಟ್ ಮಂಡನೆಯಾದ ಬಳಿಕ ಪೌರತ್ವ ತಿದ್ದುಪಡಿ ಕಾಯ್ದೆ ಪರವಾಗಿಯೂ ವಿಧಾನಮಂಡಲದಲ್ಲಿ ಪ್ರಸ್ತಾವ ಮಂಡಿಸಿ ನಿರ್ಣಯ ಕೈಗೊಳ್ಳಲು ಪಕ್ಷದಲ್ಲಿ ಗಂಭೀರ ಚಿಂತನೆ ನಡೆದಿದೆ.

ಮಂಗಳವಾರ ಸಂಜೆ ಇಲ್ಲವೇ ಬುಧವಾರ ಪಕ್ಷದ ಶಾಸಕಾಂಗ ಪಕ್ಷದ ಸಭೆ ನಡೆಸಿ ಚರ್ಚಿಸಿ ಈ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು. ಮಾ. 8ರ ನಂತರ ಸಿಎಎ ಪರ ನಿರ್ಣಯ ಕೈಗೊಳ್ಳಲು ಪ್ರಸ್ತಾವ ಮಂಡಿಸುವ ಚಿಂತನೆ ಇದೆ ಎಂದು ತಿಳಿಸಿವೆ.